ಅಧಿಕಾರಿಗಳ ಜೊತೆ ಚರ್ಚೆ ಮಾಡಿ ಕ್ರಮ ತೆಗೆದುಕೊಳ್ಳುತ್ತಾರೆ.

(ಜ) ರಾಜ್ಯದ ಕಾಲೇಜುಗಳಲ್ಲಿ ಖಾಲಿಯಿರುವ ಅಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವುದು.

ಶ್ರೀ ಎನ್.ಯೋಗೀಶ್ ಭಟ್(ಮಂಗಳೂರು): ಮಾನ್ಯ ಅಧ್ಯಕ್ಷರೆ, ರಾಜ್ಯದ ಕಾಲೇಜುಗಳಲ್ಲಿ ಸುಮಾರು 750 ಅಧ್ಯಾಪಕರ ಹುದ್ದೆಗಳು ಖಾಲಿಯಿದ್ದು, ಭರ್ತಿ ಮಾಡಲು ಇಲ್ಲಿಯವರೆಗೆ ಪ್ರಾಮುಖ್ಯತೆ ಕೊಟ್ಟಿರುವುದಿಲ್ಲ. ಕಳೆದ ನಾಲ್ಕೈದು ವರ್ಷಗಳಿಂದ ಕೆಪಿಎಸ್‌ಸಿ ಪರೀಕ್ಷೆಯಲ್ಲೂ ಅವಕಾಶ ಕೊಟ್ಟಿಲ್ಲ. ಆದುದರಿಂದ, ಸರ್ಕಾರದಲ್ಲಿ ಈ ಮೂಲಕ ಕೇಳಿಕೊಳ್ಳುವುದೇನೆಂದರೆ, ಕೆಪಿಎಸ್‌ಸಿ ಪರೀಕ್ಷೆಯಲ್ಲಿ ಈ ಸಲವಾದರೂ ಅವಕಾಶ ಕೊಟ್ಟು ಅಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ತಾವು ಕ್ರಮ ಕೈಗೊಳ್ಳುತ್ತೀರಾ? ಇದಕ್ಕೆ ಸ್ಪಷ್ಟೀಕರಣ ನೀಡಬೇಕು.

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ರಾಜ್ಯದ ಕಾಲೇಜುಗಳಲ್ಲಿ ಅಧ್ಯಾಪಕರ ಹುದ್ದೆಗಳು ಖಾಲಿ ಇವೆಯೆಂದು ಮಾನ್ಯ ಸದಸ್ಯರು ಹೇಳಿದ್ದಾರೆ. ಖಾಲಿ ಇರುವ ಹುದ್ದೆಗಳನ್ನು ತುಂಬುವುದಕ್ಕೆ ರಾಜ್ಯ ಸರ್ಕಾರವು ಕೆಪಿಎಸ್‌ಸಿಯನ್ನು ಕೇಳಬೇಕಾಗುತ್ತದೆ. ಖಾಲಿ ಇರುವ ಹುದ್ದೆಗಳು ಪ್ರಾಥಮಿಕ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಿರಬಹುದು, ಕಾಲೇಜುಗಳಿಗೆ ಸಂಬಂಧಿಸಿರಬಹುದು ಅಥವಾ ಜ್ಯೂನಿಯರ್ ಕಾಲೇಜ್ ಮತ್ತು ಫಸ್ಟ್ ಗ್ರೇಡ್ ಕಾಲೇಜುಗಳಿಗೆ ಸಂಬಂಧಿಸಿದಂತಿರಬಹುದು. ಖಾಲಿ ಇರುವ ಹುದ್ದೆಗಳನ್ನು ತುಂಬುವುದಕ್ಕೆ ನಾವು ಕಾರ್ಯಕ್ರಮ ಹಮ್ಮಿಕೊಳ್ಳುತ್ತೇವೆ.

(ಞ) ಪ್ರಾಥಮಿಕ ಶಾಲಾ ಶಿಕ್ಷಕರ ಸತ್ಯಾಗ್ರಹ.

ಶ್ರೀ ಎ.ಟಿ.ರಾಮಸ್ವಾಮಿ (ಅರಕಲಗೂಡು): ಮಾನ್ಯ ಅಧ್ಯಕ್ಷರೆ, ಪ್ರಾಥಮಿಕ ಶಾಲಾ ಶಿಕ್ಷಕರು ಬೇಡಿಕೆಗಳು ಈಡೇರುವವರೆಗೆ ಶಾಲೆಗಳ ಬಾಗಿಲು ತೆಗೆಯುವುದಿಲ್ಲವೆಂದು ಹೇಳಿದ್ದಾರೆ. ಇದರಿಂದ ಮಕ್ಕಳಿಗೆ ತುಂಬಲಾರದ ನಷ್ಟವಾಗುತ್ತಿದೆ, ಮಕ್ಕಳ ಮನಸ್ಸಿನ ಮೇಲೆ ತುಂಬ ಕೆಟ್ಟ ಪರಿಣಾಮವಾಗುತ್ತಿದೆ. ಸರ್ಕಾರ ಈ ಮುಷ್ಕರವನ್ನು ನಿಲ್ಲಿಸುವ ಬಗ್ಗೆ ಗಂಭೀರವಾಗಿ ಆಲೋಚನೆ ಮಾಡಿದೆಯೆ? ಆಲೋಚನೆ ಮಾಡುತ್ತಿಲ್ಲವೆಂದು ನನ್ನ ಅಭಿಪ್ರಾಯ. ಆದ್ದರಿಂದ, ಸರ್ಕಾರ ಶಿಕ್ಷಕರ ನ್ಯಾಯಯುತವಾದ ಬೇಡಿಕೆಗಳೇನಿದೆ ಅದರ ಬಗ್ಗೆ ಗಮನ ಹರಿಸಲಿ. ಬೇಗ ಶಾಲೆಗಳ ಬಾಗಿಲು ತೆರೆದು ಪಾಠಪ್ರವಚನಗಳು ಪ್ರಾರಂಭವಾಗಲಿ.